



ಅರುಣ ಪಿ. ಭಟ್ಟ

## ವಾರಭವಿಷ್ಯ: 24.10.2024ರಿಂದ 30.10.2024ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಸಾಧ್ಯತೆ ಇದೆ. ವೃತ್ತಿಗೆ ಸಂಬಂಧಿಸಿದಂತೆ ವಾರದ ಶುರುವಿನಿಂದಲೂ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಇತರ ಸ್ಥಳದಲ್ಲಿ ನಡೆಯುತ್ತಿರುವ ಕೆಲಸಗಳನ್ನು ನಿರ್ವಹಿಸಲು ನಿಮ್ಮನ್ನು ನಿಯೋಜನೆ ಮಾಡಬಹುದು. ಇದನ್ನು ಅವಕಾಶವಾಗಿ ಬಳಸಿಕೊಳ್ಳುವುದರಲ್ಲಿ ಬಿಡುವಿಲ್ಲದಂತೆ ಆಗುತ್ತದೆ. ಶುಭದಿನ 25. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಶುರುವಿನಿಂದ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಹಲವು ಕಾರ್ಯಗಳನ್ನು ಪೂರೈಸಲಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜೊತೆಗೆ ಭಿನ್ನಾಭಿಪ್ರಾಯ ಮರೆಯಲು ಪ್ರಯತ್ನ ಮಾಡುತ್ತೀರಿ. ನಿಮ್ಮ ಕಾರ್ಯಗಳ ವಿಸ್ತರಣೆಗೆ ಸಂಬಂಧಿಸಿದಂತೆ ಪ್ರಮುಖ ತೀರ್ಮಾನ ಕೈಗೊಳ್ಳಲಿದ್ದೀರಿ. ಶುಭದಿನ 29. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜೊತೆ ಒಪ್ಪಂದ ಮಾಡಿಕೊಳ್ಳುವ ಸಾಧ್ಯತೆ. ನಿಮ್ಮ ವ್ಯಾಪಾರ ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ಇದರಿಂದ ನಿಮ್ಮಲ್ಲಿ ಉತ್ಸಾಹ ಮೂಡಲಿದೆ. ಹೆಚ್ಚಿನ ಹಣವನ್ನು ಖರ್ಚು ಮಾಡಲಿದ್ದೀರಿ. ವೈವಾಹಿಕ ಜೀವನವು ಸಂತೋಷವಾಗಿರುತ್ತದೆ. ನಿಮ್ಮ ಕೆಲಸವನ್ನು ಹೆಚ್ಚು ವೇಗದಿಂದ ಮಾಡಲಿದ್ದೀರಿ. ಶುಭದಿನ 29. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಕ್ಕಳ ಏಳ್ಗೆಯಿಂದ ಮನಸಿಗೆ ಸಂತಸವಾಗುತ್ತದೆ. ಅವರು ತಮ್ಮ ಪಾಲಿನ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ಮಾಡುತ್ತಿರುವುದನ್ನು ಗಮನಿಸುತ್ತೀರಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವುದರಲ್ಲಿ ಸಫಲರಾಗಲಿದ್ದೀರಿ. ನಿಮ್ಮ ಉತ್ಸಾಹದಾಯಕ ಸ್ವಭಾವ ಸಂತಸವನ್ನು ಉಂಟುಮಾಡುತ್ತದೆ. ನಿಮ್ಮ ಪ್ರೀತಿಪಾತ್ರರು ಬಹಳ ಇಷ್ಟಪಡುವ ಉಡುಗೊರೆ ನೀಡಲಿದ್ದೀರಿ. ಶುಭದಿನ 25. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಕೆಲಸಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ನಿಮ್ಮ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಆ ಮೂಲಕ ತುಂಬ ವೇಗವಾಗಿ, ಮುಂಚಿತವಾಗಿ ಕೆಲಸಗಳನ್ನು ಪೂರೈಸಲು ಸಾಧ್ಯವಾಗುತ್ತದೆ. ಶುಭದಿನ 26. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 28. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಕಾನೂನಿನ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ಶುಭದಿನ 27. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಪರಿಣಾಮಕಾರಿ ಕಾರ್ಯ ಅನುಷ್ಠಾನಕ್ಕೆ ಸಿಬ್ಬಂದಿಯ ಅಗತ್ಯ ಬರುತ್ತದೆ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ಶುಭದಿನ 29. ಶ್ರೀ ಲಕ್ಷ್ಮೀನರಸಿಂಹ ಪಂಚರತ್ನ ಓದಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಯೋಜನೆ ರೂಪಿಸಲಿದ್ದೀರಿ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಹಣ ಹೂಡಿಕೆ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ತೊಂದರೆ ಆಗುತ್ತದೆ. ಶುಭದಿನ 30. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಇದರಿಂದ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಸಂಗಾತಿಯ ಭಾವನೆಗಳನ್ನು ಅರ್ಥ ಮಾಡಿಕೊಳ್ಳುವಲ್ಲಿ ಯಶಸ್ವಿ ಆಗುತ್ತೀರಿ. ಶುಭದಿನ 26. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ಇದರಿಂದ ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ಚಿಂತೆಗೀಡು ಮಾಡಿದ್ದ ವಾತಾವರಣವು ಕರಗಲಿದೆ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಆ ಮೂಲಕ ಪೂರ್ಣ ಸಾಮರ್ಥ್ಯದಿಂದ ಕೆಲಸ ಮಾಡಲು ಸಾಧ್ಯವಾಗುತ್ತದೆ. ವೈಯಕ್ತಿಕ ಬದುಕು ಸಂತಸದಾಯಕವಾಗಿ ಇರುತ್ತದೆ. ಶುಭದಿನ 28. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ಇದರಿಂದ ನಿಮಗೆ ಚಿಂತೆ ಉಂಟಾಗುತ್ತದೆ. ಆರೋಗ್ಯದಲ್ಲಿ ಚೇತರಿಕೆ ಕಾಣುತ್ತದೆ. ನಿಮ್ಮ ಸಾಮರ್ಥ್ಯ ಹೆಚ್ಚಾಗುತ್ತಾ ಸಾಗುತ್ತದೆ. ಕೆಲಸಗಳನ್ನು ವೇಗವಾಗಿ ಮಾಡುತ್ತೀರಿ. ಶುಭದಿನ 25. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.